# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 722(874) |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಶಶೀಲ್ .ಜಿ.ನಮೋಶಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13-03-2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ನವೆಂಬರ್ 17, 2024ರಂದು ರಾಯಚೂರು ಜಿಲ್ಲೆ ಸಿಂಧನೂರಿನ ಸರ್ಕಾರಿ ಪದವಿ ಕಾಲೇಜು ಪರೀಕ್ಷಾ ಕೇಂದ್ರದಲ್ಲಿ ನಡೆದಿದ್ದ ಕಲ್ಯಾಣ ಕರ್ನಾಟಕ ವೃಂದದ 97,ಪಿಡಿಓ ಹುದ್ದೆಗಳಿಗೆ ನಡೆದ ಪರೀಕ್ಷೆಯ ವೇಳೆ ಉಂಟಾದ ಗೊಂದಲದ ಬಗ್ಗೆ ಸದನದಲ್ಲಿ ಕೇಳಲಾದ ಪ್ರಶ್ನೆಗೆ ಇಲಾಖೆಯ ಅಧಿಕಾರಿಗಳು ಸದನಕ್ಕೆ ಸುಳ್ಳು ಮಾಹಿತಿ ನೀಡಿದ್ದು ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ನೀಡುವಲ್ಲಿ ವಿಳಂಬವೇ ಆಗಿಲ್ಲ ಹಾಗೂ ಯಾವುದೇ ರೀತಿಯ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿಲ್ಲವೆಂದು ರಾಜ್ಯದ ಲಕ್ಷಾಂತರ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ಸುಳ್ಳು ಮಾಹಿತಿ ನೀಡುರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಆ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು; | ಕರ್ನಾಟಕ ಲೋಕಸೇವಾ ಆಯೋಗವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ಗ್ರೂಪ್-ಸಿ ಹೈ.ಕ ವೃಂದದ 97 ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:17-11-2024 ರಂದು ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಒಟ್ಟು 840 ಅಭ್ಯರ್ಥಿಗಳನ್ನು ಹಂಚಿಕೆ ಮಾಡಿ 35 ಕೊಠಡಿಗಳಲ್ಲಿ ಪರೀಕ್ಷೆಯನ್ನು ನಡೆಸಲಾಗಿರುತ್ತದೆ.<br><br>ಪರೀಕ್ಷಾ ಕೇಂದ್ರದ ಎಲ್ಲಾ ಸಿ.ಸಿ.ಟಿ.ವಿ ಕ್ಯಾಮರಗಳ ಫೂಟೇಜ್‌ಗಳನ್ನು ಪರೀಕ್ಷಿಸಿ ಯಾವುದೇ ಪ್ರಶ್ನೆ ಪತ್ರಿಕೆಯು ಸೋರಿಕೆ ಆಗಿರುವುದು ಕಂಡುಬಂದಿರುವುದಿಲ್ಲವೆಂದು ಹಾಗೂ ಪ್ರಶ್ನೆ ಪತ್ರಿಕೆಗಳ ಸೀಲ್ಡ್ ಟ್ರಂಕ್‌ಗಳನ್ನು ಸಿ.ಸಿ.ಟಿ.ವಿ ಕ್ಯಾಮರಾ ಕಣ್ಗಾವಲಿನಲ್ಲಿ ಇರಿಸಲಾಗಿರುತ್ತದೆ. ಬೆಳಿಗ್ಗೆ 9.26 ಗಂಟೆಗೆ ಅವುಗಳನ್ನು ವಿಡಿಯೋ ಚಿತ್ರಿಕರಿಸುತ್ತಾ, ಎಲ್ಲಾರ ಸಮ್ಮುಖದಲ್ಲಿ ತೆರೆಯಲಾಗಿರುತ್ತದೆ ಹಾಗೂ ಕೊಠಡಿ ಸಂಖ್ಯೆ:05ಕ್ಕೆ ಹೊಂದಾಣಿಕೆ ಮಾಡುವ ಸಮಯದಲ್ಲಿ ಅದಕ್ಕೆ ಸಂಬಂಧಿಸಿದ ನಮೂನೆ-ಬಿ ಫಾರಂಗಳಿಗೆ ಪರೀಕ್ಷಾ ಅಭ್ಯರ್ಥಿಗಳ ಸಹಿ ಮಾಡಿಸಿ ಅವರ ಸಮ್ಮುಖದಲ್ಲಿ ತೆರೆದು ಹಂಚುವಾಗ ಕೊಠಡಿ ಸಂಖ್ಯೆ:05ರ ಕೆಲವು |

| | | |
|---|---|---|
| | | ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆ ಲೀಕ್ ಮಾಡಿರುವುದಾಗಿ ತಪ್ಪು ಭಾವಿಸಿ ಅನಗತ್ಯ ಗೊಂದಲ ಸೃಷ್ಟಿಸಿರುತ್ತಾರೆಂದು ಜಿಲ್ಲಾಧಿಕಾರಿಯವರು ಆಯೋಗಕ್ಕೆ ವರದಿ ನೀಡಿರುತ್ತಾರೆ.<br><br>ಸದರಿ ಘಟನೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ಮತ್ತು ಪರೀಕ್ಷಾ ಉಪ ಕೇಂದ್ರದ ಮೇಲ್ವಿಚಾರಕರು ಆಯೋಗಕ್ಕೆ ಸಲ್ಲಿಸಿದ್ದ ವರದಿಗಳನ್ವಯ ಸತ್ಯಾಸತ್ಯತೆಯನ್ನು ತಿಳಿಯಲು ದಿನಾಂಕ: 27-11-2024 ರಂದು ಆಯೋಗದ ತ್ರಿ-ಸದಸ್ಯರ ಉಪ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಉಪ ಸಮಿತಿಯು ಪರೀಕ್ಷಾ ಉಪ ಕೇಂದ್ರದ ಮೇಲ್ವಿಚಾರಕರು, ಸಂವೀಕ್ಷಕರು, ಸ್ಥಳೀಯ ನಿರೀಕ್ಷಣಾಧಿಕಾರಿ, ನೋಡಲ್ ಅಧಿಕಾರಿ ಹಾಗೂ ಎಫ್.ಐ.ಆರ್ ದಾಖಲಾದ 12 ಅಭ್ಯರ್ಥಿಗಳನ್ನು ಒಳಗೊಂಡಂತೆ ವಿಚಾರಣೆ ನಡೆಸಲಾಗಿದ್ದು, ವಿಚಾರಣಾ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಆ | ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾದಗಿರಿ ಮೂಲದ ರಾಯಚೂರಿನ ಸಿಂಧನೂರಿನ ಸರ್ಕಾರಿ ಕಾಲೇಜಿನಲ್ಲಿ ಪರೀಕ್ಷೆಗೆ ಹಾಜರಾಗಿದ್ದ 12 ಜನ ಅಭ್ಯರ್ಥಿಗಳ ಮೇಲೆ ದಾಖಲಿಸಿದ ಎಫ್.ಐ.ಆರ್ ಅನ್ನು ರದ್ದುಗೊಳಿಸಿದೆಯೇ; ಇಲ್ಲ ಎಂದಾದಲ್ಲಿ ಯಾವ ಕಾಲಮಿತಿಯೊಳಗೆ ಎಫ್.ಐ.ಆರ್ ಅನ್ನು ರದ್ದುಗೊಳಿಸಿ ಅಭ್ಯರ್ಥಿ ಗಳನ್ನು ದೋಷಮುಕ್ತರು ಎಂದು ಘೋಷಿಸಲಾಗುತ್ತದೆ? | ಆಯೋಗದ ತ್ರಿ-ಸದಸ್ಯರ ಉಪ ಸಮಿತಿಯು ಎಫ್.ಐ.ಆರ್ ದಾಖಲಾದ 12 ಅಭ್ಯರ್ಥಿಗಳನ್ನು ವಿಚಾರಣೆ ನಡೆಸುತ್ತಿದ್ದು, ವಿಚಾರಣಾ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

**ಸಂಖ್ಯೆ. ಸಿಆಸುಇ 52 ಎಸ್ಎಲ್ಎ 2025**

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**